ಕರ್ನಾಟಕಸರ್ಕಾರ

ಸಂಖ್ಯೆ: ಗ್ರಾಅಪ 311 ಪಬವ 2015(ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ.
ಬಹುಮಹಡಿ ಕಟ್ಟಡ.
ಬೆಂಗಳೂರು ದಿನಾಂಕ:23-05-2016.

**ಅಧಿಸೂಚನೆ**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯ ಮತ್ತು ಕೇಂದ್ರ ಪುರಸ್ಕೃತ ವಿವಿಧ ಯೋಜನೆಗಳನ್ನು ಜಾರಿಗೊಳಿಸುವ ಸಲುವಾಗಿ ಇಲಾಖೆಯ ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿ/ ಮುಂಬಡ್ತಿ ಮೂಲಕ ತುಂಬಲಾಗಿದೆ. ಇಲಾಖೆಯ ಹಲವಾರು ಹಿರಿಯ ಅಧಿಕಾರಿಗಳು ಇತರೆ ಇಲಾಖೆಗಳಿಗೆ ನಿಯೋಜನೆ ಮೇಲೆ ತೆರಳಿರುವುದರಿಂದ ಇಲಾಖೆಯಲ್ಲಿ ಬಹಳಷ್ಟು ಹುದ್ದೆಗಳು ಖಾಲಿ ಉಳಿದಿರುತ್ತವೆ. ಹಾಗಾಗಿ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಕಾಲನಿಗದಿತವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗದೆ ನಿಗದಿತ ಗುರಿ ಸಾಧಿಸಲು ಕಷ್ಟವಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ರಾಜ್ಯದ ಒಟ್ಟು 136 ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಉದ್ಭವವಾಗಿದ್ದು, ಇದರಿಂದಾಗಿ ತೊಂದರೆಗೆ ಈಡಾಗಿರುವ ಗ್ರಾಮೀಣ ಭಾಗದ ಜನರಿಗೆ ಸಮರ್ಪಕ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು ಇಲಾಖೆಗೆ ಅಧಿಕಾರಿಗಳ ಸೇವೆ ಅತ್ಯಂತ ಅವಶ್ಯವಿರುತ್ತದೆ.

ಈ ಹಿನ್ನೆಲೆಯಲ್ಲಿ ನಿಯೋಜನೆ ಮೇಲೆ ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ, ಕರ್ನಾಟಕ ಸಾಮಾನ್ಯ ಸೇವೆ(ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಯ ಉಪಕಾರ್ಯದರ್ಶಿ(ಹಿರಿಯ ಶ್ರೇಣಿ) ಅಧಿಕಾರಿಯಾದ ಶ್ರೀ ಲಕ್ಷ್ಮೀನರಸಯ್ಯ ಇವರ ಸೇವೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಗರಾಭಿವೃದ್ಧಿ ಇಲಾಖೆಯಿಂದ ಹಿಂಪಡೆದು, ಬಳ್ಳಾರಿ ಜಿಲ್ಲಾ ಪಂಚಾಯತ್‌ನಲ್ಲಿ ಖಾಲಿ ಇರುವ ಉಪಕಾರ್ಯದರ್ಶಿ(ಆಡಳಿತ) ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

23/5/16

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ**

1. ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
4. ಆಯುಕ್ತರು, ಬೃಹತ್ ಬೆಂಗಳೂರು, ಮಹಾನಗರ ಪಾಲಿಕೆ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ(ಬಿ.ಬಿ.ಎಂ.ಪಿ) ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸಂಬಂಧಿಸಿದ ಅಧಿಕಾರಿಗೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶೀ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ(ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.